4344 (3814) ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು (3814) :- ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ನಿವೇಶನಗಳನ್ನು ಪಡೆದು ಕೊಂಡವರು 10 ವರ್ಷಗಳ ಕಾಲ ಪರಭಾರೆ ಮಾಡದಂತೆ ಸರ್ಕಾರ ನಿರ್ಧಾರ ಕೈಗೊಂಡಿದೆಯೇ;

ಆ) ಹಾಗಿದ್ದಲ್ಲಿ, ಇದರಿಂದ ಆಗತಕ್ಕ ಪ್ರಯೋಜನಗಳೇನು;

ಇ) ಕೇವಲ ನಿವೇಶನ ರಹಿತರಿಗೆ ನಿವೇಶನ ಒದಗಿಸುವ ಉದ್ದೇಶದಿಂದ ಸರ್ಕಾರ 10 ವರ್ಷಗಳ ಕಾಲ ಪರಭಾರೆ ಮಾಡದಂತೆ ಎಲ್ಲಾ ನಗರ ಪಾಲಿಕೆಗಳು, ಪುರಸಭೆಗಳು ಹಾಗೂ ನಗರಸಭೆಗಳ ಮೂಲಕ ಹಂಚಿಕೆ ಮಾಡುವ ನಿವೇಶನಗಳಿಗೆ ನಿರ್ಬಂಧ ವಿಧಿಸಲು ಸರ್ಕಾರ ಕ್ರಮ ಕೈಗೊಳ್ಳುತ್ತದೆಯೇ?

ಶ್ರೀ ಧರ್ಮಸಿಂಗ್ (ಮುಖ್ಯಮಂತ್ರಿಗಳು) :

ಅ) ಹೌದು.

ಆ) ನಿವೇಶನ ರಹಿತರಿಗೆ ನಿವೇಶನ ಒದಗಿಸುವ ಹಾಗೂ ಅವರು ವಾಸ್ತವವಾಗಿ ಸದರಿ ನಿವೇಶನದಲ್ಲಿ ಮನೆ ಕಟ್ಟಿಕೊಂಡು ವಾಸ ಮಾಡುವ ಉದ್ದೇಶದಿಂದ ಸರ್ಕಾರವು ಈ ನಿರ್ಧಾರವನ್ನು ತೆಗೆದುಕೊಂಡಿರುತ್ತದೆ. ಈ ರೀತಿ 10 ವರ್ಷಗಳ ಕಾಲ ಪರಭಾರೆ ಮಾಡದಂತೆ ನಿರ್ಬಂಧ ವಿಧಿಸುವುದರಿಂದ ಹಂಚಿಕೆದಾರರು ಲಾಭಕ್ಕಾಗಿ ನಿವೇಶನವನ್ನು ಮಾರಾಟ ಮಾಡುವುದು ಮತ್ತು ನಂತರ ಆಗಿಂದಾಗ್ಗೆ ಕ್ರಯ ವ್ಯವಹಾರ ಮಾಡುವುದನ್ನು ತಡೆಗಟ್ಟಿ ಹಂಚಿಕೆದಾರರು ಹಂಚಿಕೆ ಮಾಡಿರುವ ಉದ್ದೇಶಕ್ಕಾಗಿ ನಿವೇಶನವನ್ನು ಉಪಯೋಗಿಸುವಂತಾಗಲು ಸಹಕಾರಿಯಾಗುತ್ತದೆ.

ಇ) ಸ್ಥಳೀಯ ಸಂಸ್ಥೆಗಳಿಂದ ನಿವೇಶನ ಹಂಚಿಕೆ ಪ್ರಕರಣಗಳಲ್ಲಿ ಕೂಡ ಇಂತಹ ನಿರ್ಬಂಧವನ್ನು ವಿಧಿಸಲಾಗುವುದು.

4345 (3815) ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು (ಶಿವಾಜಿನಗರ) :- ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ನಗರದಲ್ಲಿ ವಾಹನ ಸಂಚಾರ ವ್ಯವಸ್ಥೆಯ ಸುಧಾರಣೆಗಾಗಿ ಸರ್ಕಾರ ಕೈಗೊಂಡಿರುವ ಹಾಗೂ ಕೈಗೊಳ್ಳಲಿರುವ ಕಾರ್ಯಕ್ರಮಗಳು ಯಾವುವು?